ಪಿ.ಡಬ್ಲ್ಯೂ 1

ಸಾಕ್ಷಿಗೆ ಪ್ರಮಾಣ ವಚನವನ್ನು ದಿಃ 27-10-2025 ರಂದು ಬೊಧಿಸಲಾಯಿತು.

<u>ಮುಖ್ಯ ವಿಚಾರಣೆಃ ವಾದಿ ಪರ ಶ್ರೀ ಎಂ ಎಲ್ ಎನ್ ಎಚ್ ನ್ಯಾಯವಾದಿರವರಿಂದಃ</u>

ನಾನು ಸಲ್ಲಿಸುತ್ತಿರುವ ಪ್ರಮಾಣ ಪತ್ರದಲ್ಲಿರುವ ಸಂಗತಿಗಳು ನನಗೆ ಗೊತ್ತಿದ್ದು ಅದರಲ್ಲಿರುವ ಸಹಿ ನನ್ನದೇ ಆಗಿರುತ್ತದೆ. ಮತ್ತು ಪ್ರಮಾಣಪತ್ರದಲ್ಲಿರುವ ವಿಷಯಗಳು ನಾನೇ ಹೇಳಿ ಬರೆಸಿರುತ್ತೇನೆ. ಈ ಪ್ರಮಾಣ ಪತ್ರವನ್ನು ಮುಖ್ಯ ವಿಚಾರಣೆಯ ಭಾಗವಾಗಿ ಪರಿಗಣಿಸಲು ಹಾಜರುಪಡಿಸಿರುತ್ತೇನೆ.

ಪಹಣಿ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ-1 ಎಂದು, ಗ್ರಾಮ ಪಂಚಾಯತ ಅಮದಳ್ಳಿ ಇವರು ನೀಡಿದ ಕಟ್ಟಡ ಪರವಾನಿಗೆ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ-2 ಎಂದು, ಎರಡು ತೆರಿಗೆ ಪಾವತಿ ರಸೀದಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿ.ಪಿ-3 ಮತ್ತು ನಿಪಿ.4 ಎಂದು, ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ-5 ಎಂದು, ಪ್ರತಿವಾದಿಗೆ ನನ್ನ ವಕೀಲರ ಮೂಲಕ ನೀಡಿದ ನೋಟೀಸಿನ ಕಚೇರಿ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ-6 ಎಂದು, ಪ್ರತಿವಾದಿಯು ತನ್ನ ವಕೀಲರ ಮೂಲಕ ನೀಡಿದ ಉತ್ತರದ ನೋಟೀಸನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ-7 ಎಂದು ಗುರುತಿಸಲಾಯಿತು.

ಈ ಹಂತದಲ್ಲಿ ಪ್ರತಿವಾದಿ ಪರ ನ್ಯಾಯಾವಾದಿರವರು ಪಾಟೀ ಸವಾಲಿಗೆ ಸಮಯವನ್ನು ಕೋರಿದ್ದರಿಂದ ಕಾಲಾವಕಾಶ ನೀಡಿ ಮುಂದೂಡಲಾಯಿತು.

(ನನ್ನ ಹೇಳಿಕೆ ಪ್ರಕಾರ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.)

**ಓ.ಹೇ.ಕೇ. ಸರಿ ಇದೆ,**

**ಸಿವಿಲ್ ನ್ಯಾಯಾಧೀಶರು ಕಾರವಾರ**